ಕನ್ನಡಪ್ರಭ

# ವಿಧಾನ ಪರಿಷತ್ತಿನ 28 ನೌಕರರಿಗೆ ನೇಮಕಾತಿ ಪತ್ರ ವಿತರಿಸಿದ ಸಿಎಂ



ಬೆಂಗಳೂರಿನಲ್ಲಿ ಕೆಇಎ ಅಭ್ಯರ್ಥಿಗೆ ಶುಭ ಕೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ.

**ಬೆಂಗಳೂರು:** ವಿಧಾನ ಪರಿಷತ್ತಿನಲ್ಲಿ ಖಾಲಿ ಇದ್ದ 28 ಅಧಿಕಾರಿ ಮತ್ತು ನೌಕರರ ಹುದ್ದೆಗಳಿಗೆ ನೇಮಕವಾಗಿರುವ 28 ಜನರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ನೇಮಕಾತಿ ಪತ್ರ ವಿತರಿಸಿ ಶುಭ ಕೋರಿದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಮೂಲಕ ಲಿಖಿತ ಪರೀಕ್ಷೆ ನಡೆಸಿ ಅತ್ಯಂತ ಪಾರದರ್ಶಕವಾಗಿ ನೇರ ನೇಮಕಾತಿ ಪ್ರಕ್ರಿಯೆ ನಡೆಸಲಾಗಿದೆ. ಯಾವುದೇ ಗೊಂದಲಗಳಿಗೆ ಆಸ್ಪದ ನೀಡದೆ ನಿಯಮಾನುಸಾರ ನೇಮಕಾತಿ ನಡೆದಿದೆ ಎಂದು ವಿಧಾನ ಪರಿಷತ್ ಸಭಾಪತಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ವಿಜಯವಾಣಿ
ನಂ.1
ಕನ್ನಡ ದಿನಪತ್ರಿಕೆ

# ವಿಧಾನ ಪರಿಷತ್ತಿಗೆ 28 ಖಾಲಿ ಹುದ್ದೆಗಳ ಭರ್ತಿ



ವಿಜಯವಾಣಿ ಚಿತ್ರ

ನೇಮಕಾತಿ ಪ್ರಮಾಣಪತ್ರ ವಿತರಿಸಿದ ಸಿಎಂ ಸಿದ್ದರಾಮಯ್ಯ. ಸಭಾಪತಿ ಬಸವರಾಜ ಹೊರಟ್ಟಿ ಇದ್ದರು.

**ಬೆಂಗಳೂರು:** ವಿಧಾನ ಪರಿಷತ್ತಿನಲ್ಲಿ ಖಾಲಿ ಇದ್ದ 28 ಅಧಿಕಾರಿ ಮತ್ತು ನೌಕರರ ಹುದ್ದೆಗಳಿಗೆ ಮೊಟ್ಟಮೊದಲ ಬಾರಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ)ದ ಮೂಲಕ ನೇಮಕಾತಿ ನಡೆಸಲಾಗಿದ್ದು, ಯಾವುದೇ ಗೊಂದಲಗಳು ಇಲ್ಲದೆ ನಿಯಮಾನುಸಾರ ಪಾರದರ್ಶಕವಾಗಿ ನೇಮಕಾತಿ ನಡೆಯಿತು. ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪ್ರಮಾಣ ಪತ್ರವನ್ನು ವಿತರಣೆ ಮಾಡಿದರು. ಈ ವೇಳೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಇನ್ನಿತರ ಅಧಿಕಾರಿಗಳು ಇದ್ದರು.

Bengaluru Edition
Jan 04, 2026 Page No. 5
Powered by: erelego.com

ಮಾನಸಿಕವಾಗಿ ಕುಗ್ಗಿದ್ದ ತಂದೆ ಮುನಿಕೃಷ್ಣ, ಪುತ್ರನಿಗೆ ಊಟದಲ್ಲಿ ವಿಷ ಹಾಕಿದ್ದಾನೆ. ಹಾಕಿದೆ ಎಂದು ಮುನಿಕೃಷ್ಣ ಹೇಳಿದ್ದಾನೆ ಎಂದು ತಿಳಿದು ಬಂದಿದೆ.

ಮಾಡುತ್ತಿದ್ದರು. ತಮ್ಮ ಸಂಬಂಧಿಯೊಬ್ಬರ ಮಗುವಿನಹುಟ್ಟುಹಬ್ಬದಕಾರ್ಯಕ್ರಮದ

# ನೇರ ನೇಮಕಾತಿ: ಹೊರಟ್ಟಿ ಕಾರ್ಯಕ್ಕೆ ಸಿಎಂ ಮೆಚ್ಚುಗೆ

## ಪಾರದರ್ಶಕವಾಗಿ ಅಭ್ಯರ್ಥಿಗಳ ನೇಮಕಾತಿ | ಇತರೆ ಇಲಾಖೆಗಳಿಗೆ ಇದು ಮಾದರಿ: ಸಿದ್ದು

■ **ಉದಯವಾಣಿ ಸಮಾಚಾರ**



ನೇರ ನೇಮಕಾತಿಯಾದ ಅಭ್ಯರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇಮಕಾತಿ ಆದೇಶ ಪತ್ರ ವಿತರಿಸಿದರು. ಸಭಾಪತಿ ಬಸವರಾಜ ಹೊರಟ್ಟಿ ಇದ್ದರು.

**ಬೆಂಗಳೂರು:** ಕರ್ನಾಟಕ ವಿಧಾನ ಪರಿಷತ್‌ನ ಸಚಿವಾಲಯದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಕೈಗೊಂಡ ನೇರ ನೇಮಕಾತಿ ಪ್ರಕ್ರಿಯೆ ಸರ್ಕಾರದ ಇತರೆ ಇಲಾಖೆಗಳಿಗೆ ಮಾದರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಧಾನ ಪರಿಷತ್ತಿನ ಸಚಿವಾಲಯದಲ್ಲಿನ ವೃಂದ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಾಂಕೇತಿಕವಾಗಿ ನೇಮಕಾತಿ ಆದೇಶ ಪತ್ರ ನೀಡಿ ಅವರು ಮಾತನಾಡಿದರು. ಅಭ್ಯರ್ಥಿಗಳ ಆಯ್ಕೆಯಲ್ಲಿ ಸಭಾಪತಿಗಳು ಕೈಗೊಂಡಿರುವ ಪ್ರಕ್ರಿಯೆಯನ್ನು ಶ್ಲಾಘಿಸಿದರು. ಈ ಕಾರ್ಯ ಅತ್ಯಂತ ಪ್ರಶಂಸನೀಯ ಮತ್ತು ಇತರೆ ಸರ್ಕಾರಿ ಇಲಾಖೆಗಳಿಗೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು.

ಈ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದವರು ಹೆಚ್ಚಿನವರು ಗ್ರಾಮೀಣ ಪ್ರತಿಭೆಗಳು ಮತ್ತು ಪದವಿಗಳ, ಸ್ನಾತಕೋತ್ತರ ಪದವಿಗಳಲ್ಲಿ ರ‍್ಯಾಂಕ್ ವಿಜೇತರು ಸೇರಿರುವುದು ಅಭಿನಂದನೀಯ. ಒಬ್ಬ ಮಹಿಳಾ ಅಭ್ಯರ್ಥಿಯ ಇಬ್ಬರೂ ಪೋಷಕರು ಅಂಧರಾಗಿದ್ದು ಅವರ ಮಗಳು ಆಯ್ಕೆಯಾಗಿದ್ದಾರೆ. ಬಸವರಾಜ ಹೊರಟ್ಟಿ ಅಂತ ಸಭಾಪತಿ ಇದ್ದಲ್ಲಿ ಇಂತಹ ಆಯ್ಕೆಗಳು ನಡೆಯುತ್ತಿವೆ ಎಂದು ಪ್ರಶಂಸಿಸಿದರು.

ಪ್ರಥಮ ಬಾರಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತಾ ಅಧ್ಯಕ್ಷತೆಯಲ್ಲಿ ಇಲಾಖಾ ಪದೋನ್ನತಿ ಸಮಿತಿ ರಚಿಸಿ ಅತ್ಯಂತ ಪಾರದರ್ಶಕವಾಗಿ ಮತ್ತು ನ್ಯಾಯಯುತವಾಗಿ ಮಾಡಲಾಗಿದೆ. ಪದೋನ್ನತಿ ಆದೇಶಗಳನ್ನು ಸಿ.ಆ.ಸು.ಇ ಸುತ್ತೋಲೆಗಳ ಪ್ರಕಾರ ಸುಮಾರು 42 ಅಧಿಕಾರಿಗಳು/ಸಿಬ್ಬಂದಿಗೆ ಪದೋನ್ನತಿ ನೀಡಲಾಗಿದೆ ಎಂದು ಸಚಿವಾಲಯದ ಹಿರಿಯ ಅಧಿಕಾರಿಗಳು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.



Chief Minister Siddaramaiah hands over an appointment letter to a woman candidate selected for a post in the Karnataka Legislative Council, in Bengaluru on Saturday. For the first time in the history of the Council, a written examination was conducted by the KEA to recruit officers and employees for 28 posts | EXPRESS